**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ರಾಣೇಬೆನ್ನೂರು.**

**C.C No.3378/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಪ್ರಮೋದ ಪಡವಳಕರ | ***P.W-9*** |
| ತಂದೆಯ ಹೆಸರು | : ದತ್ತ ಪಡವಳಕರ | ***C.W-11*** |
| ವಯಸ್ಸು | : 60 ವರ್ಷ | |
| ಉದ್ಯೋಗ | : ನಿವೃತ್ತ ಪಿಎಸ್ಐ | |
| ವಾಸ | : ರಾಣೆಬೆನ್ನೂರು | |

**ದಿನಾಂಕಃ 21-11-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸರ್ಕಾರಿ ಸಹಾಯಕ ಅಭಿಯೋಜಕರವರಿಂದಃ**

ನಾನು 2009 ರಿಂದ ಜೂನ್ 2015 ರವರೆಗೆ ಹೆಚ್‌ಸಿ ಆಗಿ ರಾಣೆಬೆನ್ನೂರು ಶಹರ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 02-12-2013 ರಂದು ನಾನು ಮಧ್ಯಾಹ್ನ 2 ರಿಂದ ರಾತ್ರಿ 9 ಗಂಟೆಯವರೆಗೆ ಠಾಣಾ ಪ್ರಭಾರದಲ್ಲಿ ಹಾಜರಿದ್ದಾಗ ಚಾಸಾ-1 ಇವರು ಹಾಜರಾಗಿ ಲಿಖಿತ ದೂರನ್ನು ಸಾಯಂಕಾಲ 6.30 ಗಂಟೆಗೆ ಕೊಟ್ಟಿದ್ದು ಅದನ್ನು ಸ್ವೀಕರಿಸಿ ಅಪರಾಧ ಕ್ರಮಾಂಕ 203/2013 ನೇದ್ದನ್ನು ಕಲಂ 506, 498 ಎ, 504, 323 ಸಹಕಲಂ 34 ಭಾ.ದಂ.ಸಂ. ಅಡಿಯಲ್ಲಿ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1 ಎಂದು ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-5 ಎಂದು ಸಾಕ್ಷಿಯ ಸಹಿಯನ್ನು ನೋಡಿ ಗುರುತಿಸಿದ್ದರಿಂದ ನಿಪಿ-5(ಎ) ಎಂದು ಗುರುತಿಸಲಾಯಿತು.

ದಿನಾಂಕ 03-12-2013 ರಂದು ಈ ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-12 ಇವರಿಗೆ ದಾಖಲೆಗಳನ್ನು ಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ದೂರು ಕೊಡಲು ಚಾಸಾ-1 ಇವರ ಜೊತೆ ಎಷ್ಟು ಜನರು ಬಂದಿದ್ದರು ಎಂದು ಈಗ ನನಗೆ ನೆನಪಿಲ್ಲ ಇಬ್ಬರು ಜನ ಬಂದಿರಬಹುದು ಎಂದು ಹೇಳುತ್ತಾರೆ. ಸದ್ರಿ ಘಟನೆ ನಡೆದಿಲ್ಲ ಎಂಬ ಬಗ್ಗೆ ನನಗೆ ಗೊತ್ತಿದ್ದರೂ ಸುಳ್ಳು ದೂರು ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿ ಅಲ್ಲ. ಘಟನೆಯಾಗಿದ್ದ ಬಗ್ಗೆ ನನಗೆ ಗೊತ್ತಿರದೇ ಇದ್ದರೂ ಸಹ ಸುಳ್ಳು ದಾಖಲೆ ಆಧಾರದ ಮೇಲೆ ಪ್ರಥಮ ವರ್ತಮಾನ ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿ ಅಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.